# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 872 |
| ಸದಸ್ಯರ ಹೆಸರು | : | ಶ್ರೀ ಹೆಚ್.ಎಂ.ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವವರು | : | ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 21-12-2021 |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಪೋಷಣಾ ಅಭಿಯಾನ ಯೋಜನೆ ಚಾಲನೆಗೆ ದೊರೆತಿದ್ದು ಯಾವಾಗ; | ರಾಜ್ಯದಲ್ಲಿ ಪೋಷಣಾ ಆಭಿಯಾನ ಯೋಜನೆಗೆ ಅಕ್ಟೋಬರ್ 2018 ರಂದು ಚಾಲನೆ ದೊರೆತಿರುತ್ತದೆ. |
| ಆ | ಕೇಂದ್ರ ಸರ್ಕಾರದ ಈ ಯೋಜನೆಯಲ್ಲಿ ರಾಜ್ಯದ ಪಾಲು ಎಷ್ಟು; ಕೇಂದ್ರದ ಪಾಲು ಎಷ್ಟು; | ಕೇಂದ್ರ ಸರ್ಕಾರದ ಈ ಯೋಜನೆಯಲ್ಲಿ ರಾಜ್ಯದ ಪಾಲು 40% ಮತ್ತು ಕೇಂದ್ರದ ಪಾಲು 60% ಇರುತ್ತದೆ. |
| ಇ | ಈ ಯೋಜನೆಯ ಪ್ರಯೋಜನಗಳೇನು; | ಪೋಷಣಾ ಆಭಿಯಾನ ಯೋಜನೆಯ ಪ್ರಮುಖ ಪ್ರಯೋಜನಗಳು ಈ ಕೆಳಗಿನಂತಿವೆ.<br>• 0-6 ವರ್ಷದ ಮಕ್ಕಳಲ್ಲಿನ ಕುಂಠಿತ ಬೆಳವಣಿಗೆಯನ್ನು ತಡೆಗಟ್ಟುವಿಕೆ.<br>• 0-6 ವರ್ಷದ ಮಕ್ಕಳ ಅಪೌಷ್ಠಿಕತೆಯನ್ನು ತಡೆಗಟ್ಟುವಿಕೆ ಮತ್ತು ರಕ್ತಹೀನತೆಯ ಪ್ರಮಾಣವನ್ನು ಕಡಿಮೆಗೊಳಿಸುವುದು.<br>• 15-49 ವಯಸ್ಸಿನ ಹದಿಹರೆಯದ ಹೆಣ್ಣು ಮಕ್ಕಳಲ್ಲಿ ಮತ್ತು ಮಹಿಳೆಯರಲ್ಲಿ ರಕ್ತಹೀನತೆಯನ್ನು ತಡೆಗಟ್ಟುವುದು.<br>• ಕಡಿಮೆ ತೂಕವುಳ್ಳ ಮಕ್ಕಳ ಜನನ ಪ್ರಮಾಣದ ನಿಯಂತ್ರಣ.<br>• ಸದರಿ ಉದ್ದೇಶಗಳನ್ನು ಅನುಷ್ಠಾನಗೊಳಿಸಲು ಈ ಯೋಜನೆಯಡಿ ಸಮುದಾಯ ಆಧಾರಿತ ಅರಿವು ಕಾರ್ಯಕ್ರಮಗಳಿಂದ ಪೌಷ್ಟಿಕ ಆಹಾರ ಸೇವನೆಯ ಪ್ರಾಮುಖ್ಯತೆ ಮತ್ತು ಮಗುವಿನ 1000 ದಿನಗಳ ಆರೈಕೆಯ ಮಾಹಿತಿಯನ್ನು ಒದಗಿಸಲಾಗುತ್ತಿದೆ. |
| ಈ | ಈ ಯೋಜನೆಯ ಸಮರ್ಪಕವಾಗಿ ಸಂಬಂಧಪಟ್ಟವರಿಗೆ ತಲುಪಿದೆಯೇ? (ಸಂಪೂರ್ಣ ವಿವರ ನೀಡುವುದು). | ಪೋಷಣಾ ಆಭಿಯಾನ ಯೋಜನೆಯ ಪ್ರಯೋಜನಗಳನ್ನು ಸಮರ್ಪಕವಾಗಿ ತಲುಪಿಸಲಾಗುತ್ತಿದೆ.<br><br>ಪೋಷಣಾ ಆಭಿಯಾನ ಯೋಜನೆಯ ಸಮರ್ಪಕ ಅನುಷ್ಠಾನಕ್ಕಾಗಿ ಈ ಕೆಳಕಂಡ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ.<br><br>ರಾಜ್ಯದ ಎಲ್ಲಾ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಮೇಲ್ವಿಚಾರಕಿಯರಿಗೆ ಸ್ಮಾರ್ಟ್ ಫೋನ್‌ಗಳನ್ನು ವಿತರಿಸಲಾಗಿದ್ದು, ಸದರಿ ಸ್ಮಾರ್ಟ್ ಫೋನ್‌ಗಳಲ್ಲಿನ ಪೋಷಣ್ ಟ್ರ್ಯಾಕರ್ ಅಪ್ಲಿಕೇಶನ್ ಮೂಲಕ ಅಂಗನವಾಡಿ ಕೇಂದ್ರಗಳ ಎಲ್ಲಾ ಫಲಾನುಭವಿಗಳ ವಿವರಗಳನ್ನು ದಾಖಲಿಸಲಾಗುತ್ತದೆ. |

| | | |
|---|---|---|
| | | ರಾಜ್ಯದ ಎಲ್ಲಾ ಅಂಗನವಾಡಿ ಕೇಂದ್ರಗಳಿಗೆ Infant and Mother Weighing Scale, Infantometer and Stadiometer ಗಳನ್ನು ಒದಗಿಸಲಾಗಿದ್ದು ಸದರಿ ಸಾಧನಗಳ ಮೂಲಕ ಗರ್ಭಿಣಿ, ಬಾಣಂತಿಯರು ಮತ್ತು ಮಕ್ಕಳ ತೂಕ ಮತ್ತು ಎತ್ತರವನ್ನು ಅಳೆದು ಪೌಷ್ಟಿಕದ ಮಟ್ಟವನ್ನು ಗುರುತಿಸಲಾಗುತ್ತದೆ.<br><br>ಪ್ರತಿವರ್ಷ ಜನಾಂದೋಲನ ಚಟುವಟಿಕೆಗಳನ್ನು ಸೆಪ್ಟೆಂಬರ್ ತಿಂಗಳಲ್ಲಿ ಪೋಷಣ್ ಮಾಸಾಚರಣೆ ಮತ್ತು ಮಾರ್ಚ್ ತಿಂಗಳಲ್ಲಿ ಪೋಷಣ್ ಪಕ್ವಾಡ್ ಕಾರ್ಯಕ್ರಮಗಳನ್ನು ಆಚರಿಸಲಾಗುತ್ತದೆ. ಈ ಕಾರ್ಯಕ್ರಮಗಳ ಮೂಲಕ ಜನರಲ್ಲಿ ಅಪೌಷ್ಠಿಕತೆಯ ಬಗ್ಗೆ ಅರಿವು ಮೂಡಿಸಲಾಗುತ್ತಿದೆ.<br><br>ಪೋಷಣಾ ಅಭಿಯಾನ ಯೋಜನೆಯಡಿ ರಾಜ್ಯದ ಎಲ್ಲಾ ಅಂಗನವಾಡಿಗಳಲ್ಲಿ ಸಮುದಾಯ ಆಧಾರಿತ ಚಟುವಟಿಕೆಗಳನ್ನು ಪ್ರತಿ ತಿಂಗಳ ಮೊದಲ ಮತ್ತು ಮೂರನೇ ಶುಕ್ರವಾರ ನಡೆಸಲಾಗುತ್ತದೆ. ಇದರ ಮೂಲಕ ತಾಯಂದಿಯರಿಗೆ ಅರಿವು ಮೂಡಿಸಲಾಗುತ್ತಿದೆ. ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಈ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದೆ. |

**ಸಂ:** ಮಮಇ 316 ಐಸಿಡಿ 2021

(ಆಚಾರ ಹಾಲಪ್ಪ ಬಸಪ್ಪ)
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು
ಮಕ್ಕಳ ಅಭಿವೃದ್ಧಿ ವಿಕಲಚೇತನರ ಹಾಗೂ
ಹಿರಿಯ ನಾಗರೀಕರ ಸಬಲೀರಣ ಸಚಿವರು.